# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 136

21-11-2020 ರಂದು ಶನಿವಾರ ಬೆಳಿಗ್ಗೆ 12.00 ಘಂಟೆಗೆ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ವಾರ್ಡ್ ಹಂತದ ಸಮಿತಿ ಸಭೆಯನ್ನು ಡಾ|| ಅಲ್ಲಮಪ್ರಭು. ಸಹಾಯಕ ನಿರ್ದೇಶಕರು, (ಪಶುಪಾಲನೆ-ಪಶ್ಚಿಮ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 136 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: 10-09-2020ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಡಾ. ಅಲ್ಲಮಪ್ರಭು ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಕಮೀಟಿ ಸದಸ್ಯರಾದ ಶ್ರೀ ಉಮೇಶ್, ರವರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಡಾ|| ಬಾಬು ಜಗಜೀವನ್‌ರಾಂ ಉದ್ಯಾನವನವನ್ನು ಸಾರ್ವಜನಿಕರಿಗೆ ಪ್ರವೇಶದ ಬಗ್ಗೆ ಸಭೆಯಲ್ಲಿ ಕೋರಿದರು.

ಸದರಿ ವಿಷಯದ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ರವರು. ಡಾ|| ಬಾಬು ಜಗಜೀವನ್‌ರಾಂ ಉದ್ಯಾನವನದ ಕಾಮಗಾರಿಯು ಮುಕ್ತಾಯದ ಹಂತದಲ್ಲಿದ್ದು ಮುಂದಿನ ಕೆಲವು ದಿನಗಳಲ್ಲಿ ಸಾರ್ವಜನಿಕರಿಗೆ ಉದ್ಯಾನವನವನ್ನು ಸಾರ್ವಜನಿಕರಿಗೆ ಪ್ರವೇಶವಕಾಶ ಮಾಡಿಕೊಡಲಾಗುವುದೆಂದು ಸಭೆಯಲ್ಲಿ ವಿವರಣೆ ನೀಡಿದರು

ವಾರ್ಡ್ ಕಮೀಟಿ ಸದಸ್ಯರಾದ ಶ್ರೀ ಮುಜಾಮೀಲ್ ಪಾಷ ರವರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಚಿತಗಾರವನ್ನು ಹೊಸದಾಗಿ ನವೀಕರಿಸಲಾಗಿದ್ದು, ಸದರಿ ಚಿತಗಾರವನ್ನು ನಿರ್ವಹಣೆ ಮಾಡುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ವಾರ್ಡ್ ಕಮೀಟಿ ಸದಸ್ಯರಾದ ಶ್ರೀ ಮುಜಾಮೀಲ್ ಪಾಷ ರವರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಚಿತಗಾರವನ್ನು ಹೊಸದಾಗಿ ನವೀಕರಿಸಲಾಗಿದ್ದು, ಸದರಿ ಚಿತಗಾರವನ್ನು ನಿರ್ವಹಣೆ ಮಾಡುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಸದರಿ ವಿಷಯದ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ರವರು, ಸದರಿ ವಿದ್ಯುತ್ ಚಿತಗಾರದ ನಿರ್ವಹಣೆಯ ಬಗ್ಗೆ ಮೇಲಾಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಕಮಿಟಿ ಸದಸ್ಯರಾದ ಶ್ರೀ ಉಮೇಶ್ ಎಸ್ ರವರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ(Major Road)ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಸಭಾಧ್ಯಕ್ಷರಲ್ಲಿ ಮನವಿ ಮಾಡಿದರು.

ಸದರಿ ವಿಷಯದ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ರವರು ದಿನಾಂಕ 02-11-2020 ರಂದು ಮಾನ್ಯ ಆಡಳಿತಧಿಕಾರಿಗಳು ಅಂತರಿಕ ಕಛೇರಿ ಆದೇಶವನ್ನು ನೀಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಗುಂಡಿ ಮುಕ್ತವನ್ನಾಗಿ ಮಾಡಲು ಆದೇಶ ನೀಡಿದ್ದು ಅದರಂತೆ ನಮ್ಮ ವಾರ್ಡ್ ವ್ಯಾಪ್ತಿಯಲ್ಲಿ ಮುಖ್ಯರಸ್ತೆ (Major Road)ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಸಂಬಂಧಿಸಿದ ಇಲಾಖೆಗೆ ಪತ್ರವನ್ನು ಬರೆದು ಕ್ರಮವಹಿಸಲು ಕೋರಲಾಗಿದ್ದು ಮುಂದಿನ ದಿನಗಳಲ್ಲಿ ಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು: ಸದರಿ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ನಿಯಮನುಸಾರ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿ.ಡಬ್ಲ್ಯೂ. ಎಸ್. ಎಸ್. ಬಿ ಅಧಿಕಾರಿಗಳಿಗೆ ವಾರ್ಡ್ ವ್ಯಾಪ್ತಿಯಲ್ಲಿ ನೀರು ಮತ್ತು ಒಳಚರಂಡಿಗೆ ಸಂಬಂಧಿಸಿದ ದೂರುಗಳನ್ನು ದಾಖಲಿಸಿರುವ ದೂರು ಪುಸ್ತಕವನ್ನು ತೋರಿಸಿ ದೂರುಗಳನ್ನು ತುರ್ತಾಗಿ ನಿರ್ವಹಿಸಲು ಸೂಚಿಸಿದರು.

ಅಧ್ಯಕ್ಷರು: ಬಿ.ಡಬ್ಲ್ಯೂ. ಎಸ್. ಎಸ್. ಬಿ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ನಮ್ಮ ಕಛೇರಿಗೆ ಬರುವ ದೂರುಗಳನ್ನು ತುರ್ತಾಗಿ ನಿರ್ವಹಿಸುತ್ತೀದ್ದು ತಮ್ಮ ಕಛೇರಿಗೆ ಬರುವ ದೂರುಗಳನ್ನು ಸಹ ಅಧ್ಯತೆ ಮೇರೆಗೆ ಪರಿಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು: ಬೇಸ್ಕಂ ಅಧಿಕಾರಿಗಳಿಗೆ ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ (ಬೆಸ್ಕಂ) ಗೆ ಸಂಬಂಧಿಸಿದ ದೂರುಗಳನ್ನು ದಾಖಲಿಸಿರುವ ದೂರು ಪುಸ್ತಕವನ್ನು ತೊರಿಸಿ ಸದರಿ ದೂರುಗಳನ್ನು ತುರ್ತಾಗಿ ನಿರ್ವಹಿಸಲು ಸೂಚಿಸಿದರು

ಬೇಸ್ಕಂ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ನಮ್ಮ ಕಛೇರಿಗೆ ಬರುವ ದೂರುಗಳನ್ನು ತುರ್ತಾಗಿ ನಿರ್ವಹಿಸುತ್ತಿದ್ದು ತಮ್ಮ ಕಛೇರಿಗೆ ಬರುವ ದೂರುಗಳನ್ನು ಸಹ ಅಧ್ಯತೆ ಮೇರೆಗೆ ಪರಿಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು: ವಾರ್ಡ್ ನಂ. 136ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೂತ್ ಮಟ್ಟದ ಅಧಿಕಾರಿಗಳಿಂದ ಪ್ರತಿ ಮನೆ ಮನೆಗೆ ಭೇಟಿ ನೀಡಿ ಕೋವಿಡ್-19ರ ಬಗ್ಗೆ ತಿಳಿವಳಿಕೆ ನೀಡಲು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ಕಂದಾಯ ಪರಿವೀಕ್ಷಕರಿಗೆ ಬಿ.ಬಿ.ಎಂ.ಪಿ ಆದೇಶದಂತೆ ವಾರ್ಡ್ ಮಟ್ಟದ ಕಂದಾಯ ಇಲಾಖೆಯ ಕಛೇರಿಯಲ್ಲಿ ಮತದಾರರ ಗುರ್ತಿನ ಚೀಟಿಯ ಕರಡು ಪ್ರತಿಯನ್ನು ಲಗತ್ತಿಸಿ ಸಾರ್ವಜನಿಕರಿಗೆ ಪ್ರದರ್ಶಿಸುವಂತೆ ಸಭೆಯಲ್ಲಿ ತಿಳಿಸಿದರು

ಕಂದಾಯ ಪರಿವೀಕ್ಷಕರು ಮತದಾರರ ಗುರ್ತಿನ ಚೀಟಿಯ ಕರಡು ಪ್ರತಿ ತಯಾರಾಗುತ್ತಿದ್ದು ನಂತರ ಬಿ.ಬಿ.ಎಂ.ಪಿ ನಿಯಮಾನುಸಾರ ಕಾರ್ಯನಿರ್ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ವಾರ್ಡಿನಲ್ಲಿರುವ ಬ್ಲಾಕ್ ಸ್ಪಾಟ್‌ಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕಸ ಸಂಗ್ರಹಣೆಯಾಗುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತರುತ್ತಾ ಸಂಬಂಧಿಸಿದ ಅಧಿಕಾರಿಗಳಿಂದ ಸೂಕ್ತ ರೀತಿ ಕ್ರಮ ಕೈಗೊಳ್ಳಲು ತಿಳಿಸಿದರು..

ಸದರಿ ವಿಷಯದ ಬಗ್ಗೆ ಸದಸ್ಯರಾದ ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ವ್ಯಾಪ್ತಿಯಲ್ಲಿ ಬರುವ 2ನೇ ಅಡ್ಡರಸ್ತೆ, 4ನೇ ಅಡ್ಡರಸ್ತೆಯಲ್ಲಿ ಬರುವ ಬ್ಲಾಕ್ ಸ್ಪಾಟ್‌ಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕಸ ಸಂಗ್ರಹಣೆಯಾಗುತ್ತಿದು, ಪ್ರತಿ ದಿನ ಮಿಶ್ರ ಕಸದ ಕಂಪ್ಯಾಕ್ಟರ್‌ಗಳನ್ನು ಭೂಭರ್ತಿ ಘಟಕಕ್ಕೆ ಮಿತ ಪ್ರಮಾಣದಲ್ಲಿ ಬಿಡುತ್ತಿರುವುದರಿಮದ ಕಸ ಸಂಗ್ರಹಣೆ ಹೆಚ್ಚುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಕಮಿಟಿ ಸದಸ್ಯರು ವಾರ್ಡ್ ವ್ಯಾಪ್ತಿಯುಲ್ಲಿ ರಸ್ತೆ ಬದಿ ನೀರು ನಿಂತು ಸೊಳ್ಳೆಗಳ ಉತ್ಪದನೆಯು ಹೆಚ್ಚಿರುವುದರಿಂದ ಗ್ಯಾಂಗ್ ಮೇನ್ ಉಪಯೋಗಿಸಿಕೊಂಡು ಸೊಳ್ಳೆ ಔಷಧಿ ಸಿಂಪಡಿಸುವ ಗುತ್ತಿಗೆದಾರರನ್ನು ದಿನ ಔಷಧಿ ಸ್ಪಿಡಿಸುವಂತೆ ಸಭಾಧ್ಯಕ್ಷರಲ್ಲಿ ಮನವಿಯನ್ನು ಮಾಡಿದರು.

ಅಧ್ಯಕ್ಷರು : ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆ ಔಷಧಿಯನ್ನು ಸಿಂಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು

ಅಧ್ಯಕ್ಷರು ಕೋವಿಡ್-19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟಿ ಮುಖಗವಸವನ್ನು ಕಡ್ಡಾಯವಾಗಿ ಬಳಸಲು ಕ್ರಮ ವಹಿಸುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿಲಾಯಿತು

ಆರೋಗ್ಯ ವೈದ್ಯಾಧಿಕಾರಿಗಳು: ಸರ್ಕಾರದ ಆದೇಶದಂತೆ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಮುಖಗವಸುಗಳನ್ನು ಬಳಸದೇ ಇರುವವರಿಗೆ ಸೂಕ್ತ ದಂಡವನ್ನು ವಿಧಿಸುವುದನ್ನು ಪೊಲೀಸ್ ಇಲಾಖೆಗೆ ವಹಿಸಿರುವುದರಿಂದ ಪೊಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಕಟ್ಟಡ ಮತ್ತು ಕಛೇರಿಗಳನ್ನು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಸೂಚಿಸಿದರು.

ಸದರಿ ವಿಷಯದ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ರವರು. ಗುತ್ತಿಗೆದಾರರನ್ನು ಮತ್ತು ಬಿ.ಬಿ.ಎಂ.ಪಿ ಸಿಬ್ಬಂದಿಯನ್ನು ಉಪಯೋಗಿಸಿಕೊಂಡು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡುತ್ತಿರುವುದಾಗಿ ಸಭೆಯಲ್ಲಿ ವಿವರಣೆ ನೀಡಿದರು

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು

## ಹಾಜರಿದ್ದ ವಾರ್ಡ್ ಕಮೀಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮೀತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ॥ ಅಲ್ಲಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ)<br>ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | [signature] |
| 2 | ಶ್ರೀ ಗಿರಿಧರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್. ದೂ. 9986537126<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು ✓ | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ)<br>ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ<br>ಪ್ರತಿನಿಧಿ. ಗೀತಾ ಹೆಚ್. ದೂ. 9986537126 | ಸದಸ್ಯರು ✓ | [signature] |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 873557760 | ಸದಸ್ಯರು | [signature] |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 7349649906 | ಸದಸ್ಯರು | [signature] |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | [signature] |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ)<br>ರವರ ಪ್ರತಿನಿಧಿಎನ್ ಗೀತಾ ಹೆಚ್. ದೂ. 9986537126 | ಸದಸ್ಯರು ✓ | [signature] |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>ಹನುಮಂತ ರಾಜು 8618556909 | ಸದಸ್ಯರು | [signature] |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೇಸ್ಕಂ)<br>ರವರ ಪ್ರತಿನಿಧಿ | ಸದಸ್ಯರು | [signature] |

I/C. Assistant Engineer (Ele)
O&M-8, GORIPALYA,
W-3, SUB DIVISION

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮೀತಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರವರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ